ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1036
ಸದಸ್ಯರ ಹೆಸರು	:	ಶ್ರೀ. ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	29/09/2020
ಉತ್ತರಿಸುವ ಸಚಿವರು	:	ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

	ಪ್ರಶ್ನೆ	ಉತ್ತರ
ಅ	ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆ ಗೇರಿಸುವ ಸಂದರ್ಭದಲ್ಲಿ ಅನುಸರಿಸುವ ನಿಯಮಗಳೇನು;	ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆ ಅಧಿನಿಯಮ 1964 ಕಲಂ 349 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು. • ಗ್ರಾಮ ಪಂಚಾಯಿತಿ ಪ್ರದೇಶದ ಜನಸಂಖ್ಯೆಯು 10,000ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000ಕ್ಕೆ ಹೆಚ್ಚಿಲ್ಲದಂತಿರಬೇಕು. • ಅಂತಹ ಪ್ರದೇಶದ ಜನಸಂಖ್ಯೆಯು ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು. • ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ. 50 ಕ್ಕಿಂತ ಕಡಿಮೆ ಇಲ್ಲದಿರುವುದು. ದಿನಾಂಕ:19/03/2015 ರ ಸಚಿವ ಸಂಪುಟ ಸಭೆಯ ತೀರ್ಮಾನದಂತೆ, 2011 ರ ಜನಗಣತಿಯನ್ವಯ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಇರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುತ್ತಿದೆ.
ಆ	ಕಳೆದ 02 ವರ್ಷಗಳಲ್ಲಿ ರಾಜ್ಯಾದ್ಯಂತ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)	ಕಳೆದ 2 ವರ್ಷದಲ್ಲಿ 10 ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ವಿವರ ಕೆಳಕಂಡಂತಿದೆ.

	ಜಿಲ್ಲೆ	ತಾಲ್ಲೂಕು	ಗ್ರಾಮ ಪಂಚಾಯಿತಿ	ಪಟ್ಟಣ ಪಂಚಾಯಿತಿ
1	ಯಾದಗಿರಿ	ಹುಣಸಗಿ	ಹುಣಸಗಿ	ಹುಣಸಗಿ
2	ಹಾವೇರಿ	ರಟ್ಟಿಹಳ್ಳಿ	ರಟ್ಟಿಹಳ್ಳಿ	ರಟ್ಟಿಹಳ್ಳಿ
3	ದಕ್ಷಿಣ ಕನ್ನಡ	ಕಡಬ	ಕಡಬ	ಕಡಬ
4	ಚಿಕ್ಕಮಗಳೂರು	ಅಜ್ಜಂಪುರ	ಅಜ್ಜಂಪುರ	ಅಜ್ಜಂಪುರ
5	ವಿಜಯಪುರ	ತಿಕೋಟಾ	ತಿಕೋಟಾ	ತಿಕೋಟಾ
6	ಕಲಬುರಗಿ	ಕಮಲಾಪೂರ	ಕಮಲಾಪೂರ	ಕಮಲಾಪೂರ
7	ಕಲಬುರಗಿ	ಚಿತ್ತಾಪುರ	ಕಾಳಗಿ	ಕಾಳಗಿ
8	ಉಡುಪಿ	ಬೈಂದೂರು	ಬೈಂದೂರು,	ಬೈಂದೂರು
9	ಕಲಬುರಗಿ	ಜೇವರ್ಗಿ	ಯಡ್ರಾಮಿ	ಯಡ್ರಾಮಿ
10	ದಾವಣಗೆರೆ	ಹೊನ್ನಾಳಿ	ನ್ಯಾಮತಿ	ನ್ಯಾಮತಿ

ಇ	ಬಾಗಲಕೋಟೆ ಜಿಲ್ಲೆಯ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆ ಗೇರಿಸಲು ಮನವಿಗಳು ಸ್ವೀಕೃತವಾಗಿವೆ; (ಸಂಪೂರ್ಣ ವಿವರ ನೀಡುವುದು)	ಬಾಗಲಕೋಟೆ ಜಿಲ್ಲೆಯಲ್ಲಿ 7 ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಯನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. **1.ಮುಧೋಳ ತಾಲ್ಲೂಕಿನ ಲೋಕಾಪೂರ ಗ್ರಾಮ ಪಂಚಾಯಿತಿ:** ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಿ

		ದಿನಾಂಕ:23/09/2020 ರಂದು ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿದೆ. **2.ಬಾಗಲಕೋಟೆ ತಾಲ್ಲೂಕಿನ ಕಲಾದಗಿ ಗ್ರಾಮ ಪಂಚಾಯಿತಿ:** ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಮೇಲಿನ ಪ್ರಶ್ನೆಯಲ್ಲಿ (ಪ್ರಶ್ನೆ–ಅ) ತಿಳಿಸಿರುವಂತೆ, ಅರ್ಹತೆಯನ್ನು ಹೊಂದಿರುವುದಿಲ್ಲ. **3.ಹುನುಗುಂದ ತಾಲ್ಲೂಕಿನ ಸೂಳೇಭಾವಿ ಗ್ರಾಮ ಪಂಚಾಯಿತಿ:** ಕರ್ನಾಟಕ ಪುರಸಭೆ ಅಧಿನಿಯಮ 1964 ಕಲಂ 349 ರಲ್ಲಿ ನಿಗದಿಪಡಿಸಿದ ಮಾನದಂಡಗಳ ಅರ್ಹತೆ ಹೊಂದಿರುವುದಿಲ್ಲ. **4.ಇಲಕಲ್ಲ ತಾಲ್ಲೂಕಿನ ಗುಡೂರ ಗ್ರಾಮ ಪಂಚಾಯಿತಿ:** ಗುಡೂರು ಎಸ್.ಸಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಪೌರಾಡಳಿತ ನಿರ್ದೇಶನಾಲಯದಿಂದ ಸ್ವಿಕರಿಸಲಾಗಿದ್ದು, ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. **5. ಮುಧೋಳ ತಾಲ್ಲೂಕಿನ ಶಿರೋಳ ಗ್ರಾಮ ಪಂಚಾಯಿತಿ:** ಶಿರೋಳ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಪೌರಾಡಳಿತ ನಿರ್ದೇಶನಾಲಯದಿಂದ ಸ್ವಿಕರಿಸಲಾಗಿದ್ದು, ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. **6&7. ತಾಲ್ಲೂಕಿನ ಶಿರೂರು ಮತ್ತು ನೀಲಾನಗರ ಗ್ರಾಮ ಪಂಚಾಯಿತಿಗಳು:** ಶಿರೂರು ಮತ್ತು ನೀಲಾನಗರ ಗ್ರಾಮ ಪಂಚಾಯಿತಿಗಳನ್ನು ಒಟ್ಟುಗೂಡಿಸಿ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಿ, ದಿನಾಂಕ:09/11/2020 ರಂದು ಪ್ರಾಥಮಿಕ ಅಧಿಸೂಚನೆಯನ್ನು ಹೊರಡಿಸಲಾಗಿದೆ.
ಈ	ಬೀಳಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಾಗಲಕೋಟೆ ತಾಲ್ಲೂಕಿನ "ಕಲಾದಗಿ" ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಬೇಕೆಂಬ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಉ	ಹಾಗಿದ್ದಲ್ಲಿ, ಸದರಿ ಗ್ರಾಮ ಪಂಚಾಯಿತಿಯನ್ನು "ಪಟ್ಟಣ ಪಂಚಾಯಿತಿ" ಯನ್ನಾಗಿ ಇಲ್ಲಿಯವರೆಗೂ ಮೇಲ್ದರ್ಜೆಗೇರಿಸದಿರಲು ಕಾರಣಗಳೇನು;	2011 ರ ಜನಗಣತಿಯನುಸಾರ ಕಲಾದಗಿ ಗ್ರಾಮ ಪಂಚಾಯಿತಿಯ ಜನಸಂಖ್ಯೆಯು 13,675 ಇರುತ್ತದೆ. ದಿ: 19.03.2015 ರ ಸಚಿವ ಸಂಪುಟ ಸಭೆಯ ನಿರ್ಣಯದಂತೆ 15,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗಿರುತ್ತದೆ.
ಊ	ಯಾವ ಕಾಲಮಿತಿಯಲ್ಲಿ "ಪಟ್ಟಣ ಪಂಚಾಯಿತಿ" ಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು?	ಅನ್ವಯಿಸುವುದಿಲ್ಲ.

ಸಂಖ್ಯೆ:ನಅಇ 38 ಎಲ್ ಸಿಕ್ಯೂ 2020.

(ನಾರಾಯಣ ಗೌಡ)

ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು